# ವಿವಿಗಳಿಗೆ ಹೆಚ್ಚಿನ ಅನುದಾನ ಸಿಗಲಿ

## ವಿವಿಗಳ ಮೌಲ್ಯಾಂಕನ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಗುಣಮಟ್ಟದ ಶಿಕ್ಷಣ ಕಾರ್ಯಾಗಾರದಲ್ಲಿ ಸಲಹೆ

■ **ವಿಕ ಸುದ್ದಿಲೋಕ** ತುಮಕೂರು

ರಾಜ್ಯದ ವಿಶ್ವವಿದ್ಯಾಲಯಗಳು ಉತ್ತಮ ಶಿಕ್ಷಣ ನೀಡುವಲ್ಲಿ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿವೆ. ಆದರೆ ಅವುಗಳ ಮೂಲಭೂತ ಸೌಕರ್ಯವನ್ನು ಇನ್ನಷ್ಟು ಅಭಿವೃದ್ಧಿಪಡಿಸಬೇಕಾಗಿದೆ ಎಂದು ನ್ಯಾಷನಲ್ ಯೂನಿವರ್ಸಿಟಿ ಆಫ್ ಎಜುಕೇಶನಲ್ ಪ್ಲಾನಿಂಗ್ ಅಂಡ್ ಅಡ್ಮಿನಿಸ್ಟ್ರೇಶನ್ ವಿಶ್ರಾಂತ ಕುಲಪತಿ ಪ್ರೊ. ಜಂಧ್ಯಾಲ ಬಿ.ಜಿ.ತಿಲಕ್ ತಿಳಿಸಿದರು.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ರಾಷ್ಟ್ರೀಯ ಉಚ್ಚತರ ಶಿಕ್ಷಣ ಅಭಿಯಾನ (ರೂಸಾ) ಹಾಗೂ ತುಮಕೂರು ವಿವಿ ಸಹಯೋಗದಲ್ಲಿ ಶುಕ್ರವಾರ ವಿವಿಯ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಿಶ್ವವಿದ್ಯಾಲಯಗಳ ಮೌಲ್ಯಾಂಕನ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಗುಣಮಟ್ಟದ ಶಿಕ್ಷಣ ಎಂಬ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ವಿಶ್ವವಿದ್ಯಾಲಯಗಳ ಮೂಲ ಸೌಕರ್ಯವನ್ನು ವರ್ಧಿಸುವ ನಿಟ್ಟಿನಲ್ಲಿ ಸರಕಾರ ಹೆಚ್ಚಿನ ಅನುದಾನ ನೀಡಬೇಕು. ಜತೆಗೆ ಬೋಧಕರ ಕೊರತೆಯನ್ನೂ ನೀಗಿಸಬೇಕು ಎಂದು ಸಲಹೆ ನೀಡಿದರು.

ತುಮಕೂರು ವಿವಿ ಕುಲಪತಿ ಪ್ರೊ.ಎ.ಎಚ್. ರಾಜಾಸಾಬ್ ಅಧ್ಯಕ್ಷತೆ ವಹಿಸಿದ್ದರು. ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ಪ್ರೊ. ಎಸ್. ವಿ. ರಂಗನಾಥ್, ಕಾರ್ಯನಿರ್ವಾಹಕ ನಿರ್ದೇಶಕ ಡಾ. ಎಸ್.ಎ. ಕೋರಿ, ದಾವಣಗೆರೆ ವಿವಿ ಕುಲಪತಿ ಪ್ರೊ. ಬಿ.ಬಿ. ಕಲಿವಾಲ್, ಗುಲ್ಬರ್ಗ ವಿವಿ ಕುಲಪತಿ ಪ್ರೊ. ಎಸ್.ಆರ್. ನಿರಂಜನ, ತುಮಕೂರು ವಿವಿ ಕುಲಸಚಿವ ಪ್ರೊ. ಎಂ. ವೆಂಕಟೇಶ್ವರಲು, ಕುಲಪತಿ ಡಾ. ಕೆ.ಜೆ. ಪರಶುರಾಮ ಮತ್ತಿತರರು ಉಪಸ್ಥಿತರಿದ್ದರು.



ತುಮಕೂರು ವಿವಿಯಲ್ಲಿ ಶುಕ್ರವಾರ ನಡೆದ ಉನ್ನತ ಶಿಕ್ಷಣ ಕುರಿತ ಕಾರ್ಯಾಗಾರವನ್ನು ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ. ಎಸ್.ವಿ.ರಂಗನಾಥ್ ಉದ್ಘಾಟಿಸಿದರು.

ಮೌಲ್ಯಯುತ ಶಿಕ್ಷಣ ಉನ್ನತ ಶಿಕ್ಷಣದ ಗುರಿಯಾಗಬೇಕು. ನಳಂದಾ, ತಕ್ಷಶಿಲಾದಂತಹ ಶ್ರೇಷ್ಠ ವಿಶ್ವವಿದ್ಯಾಲಯಗಳ ನಾಡು ನಮ್ಮದು. ಅಂತಹ ಮೌಲಿಕ ಶಿಕ್ಷಣ ನೀಡುವ ಗುರಿಯನ್ನು ನಮ್ಮ ವಿವಿಗಳು ಹೊಂದಬೇಕು. ಸಂಶೋಧನೆಗೆ ಹೆಚ್ಚಿನ ಒತ್ತು ನೀಡಬೇಕು. ಜಾಗತೀಕರಣದ ಜತೆಗೆ ನಾವೆಲ್ಲ ಸಾಗಬೇಕಿದೆ. ಉತ್ತಮ ಕ್ಯಾಂಪಸ್, ಸಂಶೋಧನ ಕೇಂದ್ರಗಳು ಹಾಗೂ ಉತ್ತಮ ಗ್ರಂಥಾಲಯ ವಿವಿಗಳಿಗೆ ತುಂಬ ಮುಖ್ಯ. ಇವುಗಳ ಒಟ್ಟಿರೆಯಲ್ಲಿ ರ್ಯಾಂಕಿಂಗ್ ಪ್ರಕಟಿಸುವುದರಿಂದ ವಿವಿಗಳು ತಮ್ಮ ಗುಣಮಟ್ಟ ಹೆಚ್ಚಿಸಿಕೊಳ್ಳಲು ಸಾಧ್ಯವಾಗುತ್ತದೆ.

**-ಪ್ರೊ.ಜಂಧ್ಯಾಲ ಬಿ.ಜಿ.ತಿಲಕ್**, ನ್ಯಾಷನಲ್ ಯೂನಿವರ್ಸಿಟಿ ಆಫ್ ಎಜುಕೇಶನಲ್ ಪ್ಲಾನಿಂಗ್ ಅಂಡ್ ಅಡ್ಮಿನಿಸ್ಟ್ರೇಶನ್ ವಿಶ್ರಾಂತ ಕುಲಪತಿ